# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2194 |
| ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 26.03.2026 |
| ಉತ್ತರಿಸುವವರು | ಮುಖ್ಯ ಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯನ್ನು ಯಾವ ಉದೇಶಕ್ಕಾಗಿ ರಚಿಸಲಾಗಿದೆ; ಸದರಿ ಸಮಿತಿಗಳನ್ನು ಯಾವ ದಿನಾಂಕದಂದು ರಚಿಸಲಾಗಿದೆ; ಸದರಿ ಸಮಿತಿಗಳಲ್ಲಿ ರಾಜ್ಯ/ ಜಿಲ್ಲಾ /ತಾಲ್ಲೂಕು /ಹೋಬಳಿ ಮಟ್ಟಗಳಲ್ಲಿ ಎಷ್ಟು ಪದಾಧಿಕಾರಿಗಳನ್ನು / ಹುದ್ದೆಗಳನ್ನು ಸೃಜಿಸಲಾಗಿದೆ; ಪದಾಧಿಕಾರಿಗಳನ್ನು / ಹುದ್ದೆಗಳನ್ನು ನೇಮಕ ಮಾಡಲು ಅನುಸರಿಸುವ ಕ್ರಮಗಳೇನು;(ಸಂಪೂರ್ಣ ಮಾಹಿತಿ ನೀಡುವುದು) | ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಹಾಗೂ ಮೇಲ್ವಿಚಾರಣೆಗೆ ರಾಜ್ಯ ಮಟ್ಟದ ಕಾರ್ಯವ್ಯವಸ್ಥೆಯನ್ನು ಜಾರಿಗೆ ತರುವ ಅವಶ್ಯಕತೆಯನ್ನು ಮನಗಂಡು, ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಅಗತ್ಯ ನೀತಿ ಸುಧಾರಣೆಗಳು, ಅನುಷ್ಠಾನದ ವಿಧಾನಗಳಲ್ಲಿ ಸರಳೀಕರಣ ತರಲು ಹಾಗೂ ತಳಮಟ್ಟದಲ್ಲಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಮತ್ತು ಸಮಿತಿಗಳನ್ನು ರಚಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ(ಆಸು) 18 ಸ್ಕೀಮರ 2024, ದಿನಾಂಕ: 25.01.2024ರ ಆದೇಶದನ್ವಯ ಈ ಸಮಿತಿಗಳನ್ನು ರಚಿಸಲಾಗಿದೆ **(ಅನುಬಂಧ-1).**<br><br>ರಾಜ್ಯ/ಜಿಲ್ಲಾ/ತಾಲ್ಲೂಕು ಮಟ್ಟಗಳಲ್ಲಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳನ್ನು ಸೃಜಿಸುವ ಹಾಗೂ ನೇಮಕ ಮಾಡಲು ಅನುಸರಿಸುವ ಕ್ರಮಗಳನ್ನು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ(ಆಸು) 18 ಸ್ಕೀಮರ 2024, ದಿನಾಂಕ:25.01.2024 ರಲ್ಲಿ ನಿಗದಿಪಡಿಸಿ ಆದೇಶಿಸಲಾಗಿದೆ. ಹೋಬಳಿ ಮಟ್ಟದಲ್ಲಿ ಪದಾಧಿಕಾರಿ / ಹುದ್ದೆಗಳನ್ನು ಸೃಜಿಸ ಲಾಗಿರುವುದಿಲ್ಲ. |
| ಆ | ಸದರಿ ಸಮಿತಿಗಳ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧ್ಯಕ್ಷರು /ಉಪಾಧ್ಯಕ್ಷರು/ಪದಾಧಿಕಾರಿಗಳಿಗೆ ವೇತನ/ ಗೌರವಧನ/ ಭತ್ಯೆಗಳು/ಇನ್ನಿತರ ಸೌಲಭ್ಯಗಳನ್ನು ನೀಡಲಾಗಿದೆಯೇ; (ಪಾವತಿಗಳ ಸಂಪೂರ್ಣ ಮಾಹಿತಿ ನೀಡುವುದು); ನೀಡಿದ್ದಲ್ಲಿ ಯಾವ ನಿಯಮಗಳಡಿ ನೀಡಲಾಗಿದೆ; ಈ ಸೌಲಭ್ಯಗಳನ್ನು ನೀಡಲು ನಿಯಮಗಳಲ್ಲಿ ಅವಕಾಶವಿದೆಯೇ; | ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ(ಆಸು) 18 ಸ್ಕೀಮರ 2024(ಭಾಗ-2), ದಿನಾಂಕ:24.07.2024, ಸಿಆಸುಇ(ಆಸು) 159 ಸ್ಕೀಮರ 2024, ದಿನಾಂಕ:24.02.2025 ಹಾಗೂ ಸಿಆಸುಇ(ಆಸು) 97 ಈಕಾಅ 2024, ದಿನಾಂಕ: 24.02.2025 ಗಳಲ್ಲಿ ರಾಜ್ಯ, ಜಿಲ್ಲಾ ಮತ್ತು ಗ್ಯಾರಂಟಿ ಮಟ್ಟದ ಅಧ್ಯಕ್ಷರು / ಉಪಾಧ್ಯಕ್ಷರು/ ಸದಸ್ಯರುಗಳಿಗೆ ವೇತನ / ಗೌರವಧನ/ಭತ್ಯೆಗಳು/ ಇನ್ನಿತರ ಸೌಲಭ್ಯಗಳನ್ನು ನಿಗದಿಪಡಿಸಿ ಆದೇಶಿಸ ಲಾಗಿದೆ **(ಅನುಬಂಧ-2).** |

| | | |
|---|---|---|
| ಇ | ಗ್ಯಾರಂಟಿ ಯೋಜನೆಗಳನ್ನು ಸರ್ಕಾರಿ ಇಲಾಖೆಗಳಿಂದ ಮೇಲ್ವಿಚಾರಣೆ ನಡೆಸಿ, ಫಲಾನುಭವಿಗಳ ಸಂಬಂಧಿಸಿದ ದಾಖಲೆಗಳನ್ನು ಇಲಾಖೆಗಳೇ ಪಡೆದುಕೊಂಡು ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಿ ಸದರಿ ಫಲಾನುಭವಿಗಳಾನುಸಾರ ಯೋಜನೆಗಳಲ್ಲಿ ಹಣ ವ್ಯಯಿಸಲಾಗುತ್ತಿದ್ದು, ಇವೆಲ್ಲವನ್ನೂ ಸಂಬಂಧಿಸಿದ ಇಲಾಖೆಗಳೇ ಅನುಷ್ಠಾನ ಮಾಡುತ್ತಿರುವುದರಿಂದ ಗ್ಯಾರಂಟಿ ಅನುಷ್ಠಾನ ಸಮಿತಿಗಳ ಕಾರ್ಯವೇನು ಹಾಗೂ ಅವಶ್ಯಕತೆಯೇನು; ಒಂದು ಪಕ್ಷದ ಕಾರ್ಯಕರ್ತರಿಗೆ ಆದಾಯವನ್ನು ನೀಡುವ ಹುದ್ದೆಗಳನ್ನು ನೀಡಲು ಸರ್ಕಾರವೇ ರಾಜ್ಯದ ಜನತೆಯ ಹಣವನ್ನು ಪೋಲು ಮಾಡಿದಂತಾಗುವುದಲ್ಲವೇ? | ಪಂಚ ಗ್ಯಾರಂಟಿ ಯೋಜನೆಗಳಡಿ ಅತಿ ಹೆಚ್ಚಿನ ಸಂಖ್ಯೆಯ ಫಲಾನುಭವಿಗಳಿದ್ದು, ರಾಜ್ಯ ಮಟ್ಟದಲ್ಲಿ, ಎಲ್ಲಾ ಐದು ಇಲಾಖೆಗಳೊಂದಿಗೆ ಸಮನ್ವಯಗೊಳಿಸಲು ಹಾಗೂ ಜಿಲ್ಲಾ ಮತ್ತು ತಾಲ್ಲೂಕುಗಳಲ್ಲಿ ಫಲಾನುಭವಿಗಳು ಸವಲತ್ತುಗಳನ್ನು ಪಡೆಯುವುದನ್ನು ಖಚಿತ ಪಡಿಸಿಕೊಳ್ಳಲು ಮತ್ತು ಯಾವುದೇ ಲೋಪಗಳು ಅಥವಾ ವಿಳಂಬಗಳಿದ್ದರೆ ದೂರು ನೀಡಲು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದೆ. |
| ಈ | ಸದರಿ ಸಮಿತಿಗಳಲ್ಲಿ ಯಾವ ಹುದ್ದೆಗಳಿಗೆ ಸಚಿವ ಸಂಪುಟ ದರ್ಜೆ ಸ್ಥಾನಮಾನ ನೀಡಲಾಗಿದೆ; ನೀಡಿದ್ದಲ್ಲಿ ಈ ಕುರಿತು ಆದೇಶಗಳ ಪ್ರತಿಗಳೊಂದಿಗೆ ಮಾಹಿತಿ ನೀಡುವುದು; ಸಂಪುಟ ದರ್ಜೆಯ ಸ್ಥಾನಮಾನಗಳೊಂದಿಗೆ ಯಾವ ಯಾವ ಸವಲತ್ತುಗಳನ್ನು ನೀಡಲಾಗಿದೆ; ಮಾಹಿತಿ ನೀಡುವುದು? | ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ(ಆಸು) 18 ಸ್ವೀಮರ 2024, ದಿನಾಂಕ:25.01.2024 ರನ್ವಯ ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಿಗೆ ಸಚಿವ ಸಂಪುಟ ದರ್ಜೆಯ ಸ್ಥಾನಮಾನ ನೀಡಲಾಗುವುದು.<br><br>ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ(ಆಸು) 18 ಸ್ವೀಮರ 2024(ಭಾಗ-2), ದಿನಾಂಕ:24.07.2024 ರಲ್ಲಿ **(ಅನುಬಂಧ-3)** ಹೊರಡಿಸಲಾದ ಆದೇಶದಲ್ಲಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಅಧ್ಯಕ್ಷರ ಆಪ್ತ ಸಿಬ್ಬಂದಿ ಮತ್ತು ಉಪಾಧ್ಯಕ್ಷರು, ಉಪಾಧ್ಯಕ್ಷರ ಆಪ್ತ ಸಿಬ್ಬಂದಿ ಹಾಗೂ ಪ್ರಾಧಿಕಾರದ ಸದಸ್ಯರುಗಳ ವೇತನ ಮತ್ತು ಇತರೆ ಸವಲತ್ತುಗಳನ್ನು ನಿಗದಿಪಡಿಸಿ ಆದೇಶಿಸಲಾಗಿದೆ. |

ಸಂಖ್ಯೆ:ಸಿಆಸುಇ(ಆಸು) 31 ತಖಇ 2026

**(ಸಿದ್ದರಾಮಯ್ಯ)**
ಮುಖ್ಯ ಮಂತ್ರಿ

ಅನುಬಂಧ-1

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಸಾಂಸ್ಥಿಕ ಕಾರ್ಯವಿಧಾನಗಳು - ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನ ಪ್ರಾಧಿಕಾರ, ಬಿ.ಬಿ.ಎಂ.ಪಿ. ಮಟ್ಟದ ಅನುಷ್ಠಾನ ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನ ಸಮಿತಿಗಳನ್ನು ರಚಿಸಿ, ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಕುರಿತು.

**ಓದಲಾಗಿದೆ:** ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ: ಮು.ಮಂ/ಅ.ಕಾ/ 7168428/2024, ದಿನಾಂಕ: 17-01-2024.

*****

**ಪ್ರಸ್ತಾವನೆ:**

ಸನ್ಮಾನ್ಯ ಮುಖ್ಯಮಂತ್ರಿಗಳು ಜುಲೈ-2023ರಲ್ಲಿ ಮಂಡಿಸಿದ 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯದ ಜನತೆಗೆ 'ಶಕ್ತಿ', 'ಗೃಹ ಜ್ಯೋತಿ', 'ಅನ್ನ ಭಾಗ್ಯ', 'ಗೃಹ ಲಕ್ಷ್ಮಿ' ಮತ್ತು 'ಯುವ ನಿಧಿ' ಯೋಜನೆಗಳನ್ನು ಜಾರಿಗೊಳಿಸುವುದಾಗಿ ಘೋಷಿಸಿರುತ್ತಾರೆ. ಅದರಂತೆ, ಶಕ್ತಿ ಯೋಜನೆಯನ್ನು ಜೂನ್ 11, 2023 ರಂದು, 'ಗೃಹ ಜ್ಯೋತಿ' ಯೋಜನೆಯನ್ನು ಜುಲೈ 1, 2023 ರಂದು, 'ಅನ್ನ ಭಾಗ್ಯ' ಯೋಜನೆಯನ್ನು ಜುಲೈ-2023ರಂದು, 'ಗೃಹ ಲಕ್ಷ್ಮಿ' ಯೋಜನೆಯನ್ನು 2023ರಂದು ಮತ್ತು 'ಯುವ ನಿಧಿ' ಯೋಜನೆಯನ್ನು ಜನವರಿ 12, 2024 ರಂದು ಜಾರಿಗೊಳಿಸಿ, ಅರ್ಹ ಫಲಾನುಭವಿಗಳಿಗೆ ಯೋಜನೆಯ ಲಾಭಗಳನ್ನು ವಿತರಿಸಲಾಗುತ್ತಿದೆ.

'ಶಕ್ತಿ' ಯೋಜನೆಯ ಮೂಲಕ ರಾಜ್ಯದ ಎಲ್ಲಾ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ರಾಜ್ಯದ ಪ್ರತಿ ಮಹಿಳೆಯೂ ಉಚಿತವಾಗಿ ಪ್ರಯಾಣ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಹಸಿವು ಮುಕ್ತ ಕರ್ನಾಟಕ ಎಂಬುದು ಸರ್ಕಾರದ ಪ್ರಧಾನ ಆಶಯ. ಅದಕ್ಕಾಗಿ ಅನ್ನ ಭಾಗ್ಯ ಯೋಜನೆಯ ಮೂಲಕ 'ನೆಮ್ಮದಿಯ ಜೀವನಕ್ಕಾಗಿ ಆಹಾರ ಭದ್ರತೆ" ಎಂಬ ಘೋಷವಾಕ್ಯದೊಂದಿಗೆ ರಾಜ್ಯದ ಬಡ ಕುಟುಂಬದ (ಬಿ.ಪಿ.ಎಲ್) ಪ್ರತಿ ಸದಸ್ಯರಿಗೆ ಪ್ರತಿ ತಿಂಗಳು 5 ಕೆ.ಜಿ. ಅಕ್ಕಿ/ಧಾನ್ಯ ಹಾಗೂ 5 ಕೆ.ಜಿ. ಅಕ್ಕಿಯ ಬೆಲೆಗೆ ಸಮನಾಗಿ ರೂ.170.00 ಗಳನ್ನು ಸರ್ಕಾರದಿಂದ ನೀಡಲಾಗುತ್ತಿದೆ.

'ಗೃಹ ಜ್ಯೋತಿ' ಯೋಜನೆಯ ಮೂಲಕ ರಾಜ್ಯದ ಎಲ್ಲಾ ಕುಟುಂಬಗಳಿಗೆ ಗೃಹಬಳಕೆಯ 200 ಯೂನಿಟ್ ವರೆಗಿನ ವಿದ್ಯುತ್ತನ್ನು ಉಚಿತವಾಗಿ ನೀಡಲಾಗುತ್ತಿದೆ. ತಿಂಗಳ ಸರಾಸರಿ ವಿದ್ಯುತ್ ಬಳಕೆಯ ಪ್ರಮಾಣಕ್ಕೆ ಶೇ.10 ರಷ್ಟನ್ನು ಹೆಚ್ಚುವರಿಯಾಗಿ ಬಳಸಿದರೂ ಸಹ ವಿದ್ಯುತ್ತನ್ನು ಉಚಿತವಾಗಿ ನೀಡಲಾಗುತ್ತಿದೆ.

'ಗೃಹ ಲಕ್ಷ್ಮಿ' ಯೋಜನೆಯಡಿ ರಾಜ್ಯದ ಪ್ರತಿ ಕುಟುಂಬದ ಮಹಿಳಾ ಮುಖ್ಯಸ್ಥೆಗೆ ಮಾಸಿಕ ರೂ.2,000/- ಸಹಾಯಧನ ನೀಡಲಾಗುತ್ತಿದೆ.

'ಯುವ ನಿಧಿ' ಯೋಜನೆಯ ಮೂಲಕ 2022-2023ನೇ ಸಾಲಿನಲ್ಲಿ ಪದವಿ ಪೂರ್ಣಗೊಳಿಸಿ ಉದ್ಯೋಗ ಸಿಗದ ನಿರುದ್ಯೋಗಿ ಯುವಜನರಿಗೆ ಮಾಸಿಕ ರೂ.3000/-ಗಳನ್ನು ಹಾಗೂ ಡಿಪ್ಲೊಮೊ ವ್ಯಾಸಂಗ ಪೂರ್ಣಗೊಳಿಸಿ ಉದ್ಯೋಗ ಸಿಗದ ನಿರುದ್ಯೋಗಿ ಯುವಜನರಿಗೆ ಮಾಸಿಕ ರೂ.1500/-ಗಳ ನಿರುದ್ಯೋಗ ಭತ್ಯೆಯನ್ನು ಒದಗಿಸಲಾಗುತ್ತಿದೆ.

ಮೇಲ್ಕಂಡ 5 ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಹಾಗೂ ಮೇಲ್ವಿಚಾರಣೆಗೆ ರಾಜ್ಯ ಮಟ್ಟದ ಕಾರ್ಯವ್ಯವಸ್ಥೆಯನ್ನು ಜಾರಿಗೆ ತರುವ ಅವಶ್ಯಕತೆಯನ್ನು ಸರ್ಕಾರವು ಮನಗಂಡು, ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಅಗತ್ಯ ನೀತಿ, ಸುಧಾರಣೆಗಳು, ಅನುಷ್ಠಾನದ ವಿಧಾನಗಳಲ್ಲಿ ಸರಳೀಕರಣ ತರಲು ಹಾಗೂ ತಳಮಟ್ಟದಲ್ಲಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮಾನ್ಯ ಮುಖ್ಯಮಂತ್ರಿಯವರು ಮೇಲೆ ಓದಲಾದ ದಿನಾಂಕ: 17/01/2024ರ ಟಿಪ್ಪಣಿ ಮೂಲಕ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನ ಪ್ರಾಧಿಕಾರಗಳನ್ನು ಮತ್ತು ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನ ಸಮಿತಿಗಳನ್ನು ರಚಿಸಲು ಸೂಕ್ತ ಆದೇಶ ಹೊರಡಿಸುವಂತೆ ನಿರ್ದೇಶನ ನೀಡಿರುತ್ತಾರೆ.

ಈ ನಿಟ್ಟಿನಲ್ಲಿ, ಸರ್ಕಾರವು ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗಾಗಿ ಸಾಂಸ್ಥಿಕ ಕಾರ್ಯವಿಧಾನಗಳನ್ನು ಜಾರಿಗೆ ತರಲು ನಿರ್ಣಯಿಸಿ, ರಾಜ್ಯ ಮಟ್ಟದಲ್ಲಿ 'ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ', ಜಿಲ್ಲಾ ಮಟ್ಟದಲ್ಲಿ 'ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ' ತಾಲ್ಲೂಕು ಮಟ್ಟದಲ್ಲಿ 'ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ' ಹಾಗೂ ಬಿ.ಬಿ.ಎಂ.ಪಿ. ಮಟ್ಟದಲ್ಲಿ "ಬಿ.ಬಿ.ಎಂ.ಪಿ. ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ" ಗಳನ್ನು ರಚಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 18 ಸ್ಥಿಮರ 2024,</u>**

**<u>ಬೆಂಗಳೂರು, ದಿನಾಂಕ:25.01.2024</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಮೇಲ್ವಿಚಾರಣೆಗಾಗಿ ***'ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ', 'ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ' 'ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ' ಹಾಗೂ ಬಿ.ಬಿ.ಎಂ.ಪಿ. ಮಟ್ಟದಲ್ಲಿ ಬಿ.ಬಿ.ಎಂ.ಪಿ. ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ"*** ಗಳನ್ನು ಈ ಕೆಳಕಂಡಂತೆ ರಚಿಸಲು ಆದೇಶಿಸಿದೆ:-

**I. ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ:**

| | |
|---|---|
| ಸಚಿವ ಸಂಪುಟ ದರ್ಜೆಯ ಸ್ಥಾನಮಾನ ಹೊಂದಿರುವವರು | ಅಧ್ಯಕ್ಷರು |
| ರಾಜ್ಯ ಸಚಿವ ಸ್ಥಾನಮಾನ ಹೊಂದಿದವರು (ಐದು ಸಂಖ್ಯೆ) | ಉಪಾಧ್ಯಕ್ಷರು |
| 31 ಜಿಲ್ಲೆಗಳನ್ನು ಪ್ರತಿನಿಧಿಸುವ<br>(ಪ್ರತಿ ಜಿಲ್ಲೆಗೆ ಒಬ್ಬರಂತೆ- 31 ಸಂಖ್ಯೆ) | ಸದಸ್ಯರು |
| ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಟಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | ಸದಸ್ಯ ಕಾರ್ಯದರ್ಶಿ |

ರಾಜ್ಯದ ಜಿಲ್ಲೆಗಳನ್ನು 5 ವಿಭಾಗಗಳನ್ನಾಗಿ ವಿಂಗಡಿಸಿ, ರಾಜ್ಯ ಮಟ್ಟದ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಿಗೆ ಪ್ರತಿಯೊಂದು ವಿಭಾಗಗಳ ಜವಾಬ್ದಾರಿಯನ್ನು ಹಂಚಿಕೆ ಮಾಡಿ ಸದಸ್ಯ ಕಾರ್ಯದರ್ಶಿಯವರು ಆದೇಶ ಹೊರಡಿಸುವುದು.

ಸದಸ್ಯ ಕಾರ್ಯದರ್ಶಿಯವರು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವ ಇತರ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರನ್ನು ರಾಜ್ಯ ಮಟ್ಟದ ಅನುಷ್ಠಾನ ಪ್ರಾಧಿಕಾರದ ಸದಸ್ಯರನ್ನಾಗಿ ನೇಮಕ ಮಾಡುವುದು.

ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ಸದಸ್ಯ ಕಾರ್ಯದರ್ಶಿರವರು ಸಕ್ಷಮ ಪ್ರಾಧಿಕಾರದ (ಸರ್ಕಾರದ) ಅನುಮೋದನೆ ಪಡೆದು ನೇಮಿಸತಕ್ಕದ್ದು.

ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಗಳು ಹಾಗೂ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಕಾರ್ಯಗಳು, ಜವಾಬ್ದಾರಿಗಳು, ಅಧಿಕಾರಿ/ಸಿಬ್ಬಂದಿಗಳ ನೇಮಕಾತಿ, ರಾಜೀನಾಮೆ, ಕಛೇರಿ ನಿರ್ವಹಣೆ, ಸವಲತ್ತು, ಗೌರವಧನ, ಭತ್ಯೆಗಳು ಹಾಗೂ ಇತರೆ ಯಾವುದೇ ಸಂಬಂಧಪಟ್ಟ ವಿಷಯಗಳ ಕುರಿತು ಸಕ್ಷಮ ಪ್ರಾಧಿಕಾರದ (ಸರ್ಕಾರದ) ಅನುಮೋದನೆಯೊಂದಿಗೆ ರಾಜ್ಯ ಮಟ್ಟದ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರು ಪ್ರತ್ಯೇಕವಾಗಿ ಆದೇಶ ಹೊರಡಿಸುವುದು.

ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಮುಖ ಜವಾಬ್ದಾರಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಯಾಗಿರುತ್ತದೆ ಹಾಗೂ ಈ ಪ್ರಾಧಿಕಾರವು ನೀತಿ ರಚನೆ, ಸುಧಾರಣಾ ಕ್ರಮಗಳು, ಅನುಷ್ಠಾನದಲ್ಲಿ ಸರಳೀಕರಣ ಹಾಗೂ ಸಮಸ್ಯೆಯತೆ ತರುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ.



3



Generated from eOffice by M.SHIVANNA, DPARAR-INS-SA(MS), SENIOR ASSISTANT, DEPARTMENT OF PERSONNEL AND ADMINISTRATIVE REFORMS ,

## II. ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ

| | |
|---|---|
| ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಒಬ್ಬ ಸದಸ್ಯರು | ಅಧ್ಯಕ್ಷರು |
| 5 ಸಂಖ್ಯೆ | ಉಪಾಧ್ಯಕ್ಷರು |
| 15 ಸಂಖ್ಯೆ | ಸದಸ್ಯರು |
| ಆಯಾ ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳು | ಸದಸ್ಯ ಕಾರ್ಯದರ್ಶಿ |

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನು ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರವು ನೇಮಕ ಮಾಡುವುದು.

ಆಯಾ ಜಿಲ್ಲೆಗಳ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವುದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಮುಖ ಜವಾಬ್ದಾರಿಯಾಗಿರುತ್ತದೆ. ರಾಜ್ಯದ ಯಾವೊಬ್ಬ ಅರ್ಹ ಫಲಾನುಭವಿಯೂ ಈ ಯೋಜನೆಗಳ ಸೌಲಭ್ಯಗಳಿಂದ ಹೊರಗುಳಿಯದಂತೆ ನೋಡಿಕೊಳ್ಳುವುದು ಇದರ ಪ್ರಮುಖ ಉದ್ದೇಶವಾಗಿರುತ್ತದೆ.

ಜಿಲ್ಲಾ ಮಟ್ಟದ ಪ್ರಾಧಿಕಾರವು ಆಯಾ ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ, ಇಲಾಖೆಯ ಅಧಿಕಾರಿಗಳೊಂದಿಗೆ ಹಾಗೂ ತಳಮಟ್ಟದಲ್ಲಿ ಸಮನ್ವಯತೆ, ಯೋಜನೆಯ ಬಗ್ಗೆ ಮಾಹಿತಿಯನ್ನು ಜನರಿಗೆ ಸಮರ್ಪಕವಾಗಿ ತಲುಪಿಸುವ ಮೂಲಕ ಫಲಾನುಭವಿಗಳಿಗೆ ಅರಿವು ಮೂಡಿಸುವ ಕಾರ್ಯ ಮಾಡುವುದು.

## III. ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ

| | |
|---|---|
| ಜಿಲ್ಲಾ ಮಟ್ಟದ ಅನುಷ್ಠಾನ ಪ್ರಾಧಿಕಾರದ ಒಬ್ಬ ಸದಸ್ಯರು | ಅಧ್ಯಕ್ಷರು |
| 14 ಸಂಖ್ಯೆ | ಸದಸ್ಯರು |
| ಕಾರ್ಯನಿರ್ವಹಣಾಧಿಕಾರಿ (EO) | ಸದಸ್ಯ ಕಾರ್ಯದರ್ಶಿ |

ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರನ್ನು ಮತ್ತು ಸದಸ್ಯರನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರವು ನೇಮಕ ಮಾಡುವುದು.

ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಆಯಾ ತಾಲ್ಲೂಕಿನ ನಗರ ಸ್ಥಳೀಯ ಸಂಸ್ಥೆಗಳು/ಹೋಬಳಿ/ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ 'ಗ್ಯಾರಂಟಿ ಸಮಾವೇಶ' ಆಯೋಜಿಸುವುದು ಈ ಸಮಿತಿಯ ಪ್ರಮುಖ ಜವಾಬ್ದಾರಿಯಾಗಿರಲಿದೆ.

ಹೋಬಳಿ ಮಟ್ಟದ ಶಿಬಿರಗಳಿಗೆ ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸುವುದು.

ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯು ಗ್ಯಾರಂಟಿ ಯೋಜನೆಗಳ ಫಲಾನುಭವಿ ನೋಂದಣಿ ಶಿಬಿರಗಳನ್ನು ಆಯೋಜಿಸಲು ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯತೆ ಸಾಧಿಸಿ, ಅಗತ್ಯ ನೆರವು ನೀಡುವುದು.

ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯು ಅಗತ್ಯ ಸಿಬ್ಬಂದಿ, ಇನ್ನಿತರೆ ಸೂಕ್ತ ವ್ಯವಸ್ಥೆಗಳನ್ನು ಮಾಡಿ, ಶಿಬಿರಗಳ ಸುಗಮ ಆಯೋಜನೆಗೆ ಅಗತ್ಯ ಕ್ರಮವಹಿಸುವುದು. ಯೋಜನೆಗಳ ಬಗ್ಗೆ ಐ.ಇ.ಸಿ. ಪ್ರಚಾರ ಕಾರ್ಯಕ್ರಮಗಳನ್ನು ಆಯೋಜಿಸಿ ಜನರಿಗೆ ಮಾಹಿತಿ ಒದಗಿಸುವುದು.

ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು EO ರವರುಗಳು ಸಮಿತಿಯ ಕಾರ್ಯನಿರ್ವಹಣೆಗೆ ಜಾಗದ ವ್ಯವಸ್ಥೆಯನ್ನು ಮಾಡುವುದು.

**IV) ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ (28 ವಿಧಾನಸಭಾ ಕ್ಷೇತ್ರ)**

| | |
|---|---|
| ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಒಬ್ಬ ಸದಸ್ಯರು | ಅಧ್ಯಕ್ಷರು |
| 28 ಸಂಖ್ಯೆ (ವಿಧಾನ ಸಭಾ ಕ್ಷೇತ್ರಗಳಿಂದ ಆಯ್ಕೆ ಸದಸ್ಯರು ) | ಸದಸ್ಯರು |
| ವಿಶೇಷ ಆಯುಕ್ತರು, ಬಿಬಿಎಂಪಿ (ಆಡಳಿತ) ರವರು | ಸದಸ್ಯ ಕಾರ್ಯದರ್ಶಿ |

ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಮತ್ತು ಸದಸ್ಯರನ್ನು ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರವು ನೇಮಕ ಮಾಡುವುದು.

ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಕಾರ್ಯಗಳು, ಜವಾಬ್ದಾರಿಗಳು, ಅಧಿಕಾರಿ/ಸಿಬ್ಬಂದಿಗಳ ನೇಮಕಾತಿ, ರಾಜೀನಾಮೆ, ಕಛೇರಿ ನಿರ್ವಹಣೆ, ಸವಲತ್ತು, ಗೌರವಧನ, ಭತ್ಯೆಗಳು ಹಾಗೂ ಇತರೆ ಯಾವುದೇ ಸಂಬಂಧಪಟ್ಟ ವಿಷಯಗಳ ಕುರಿತು ಸಕ್ಷಮ ಪ್ರಾಧಿಕಾರದ (ಸರ್ಕಾರದ) ಅನುಮೋದನೆಯೊಂದಿಗೆ ರಾಜ್ಯ ಮಟ್ಟದ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರು ಪ್ರತ್ಯೇಕವಾಗಿ ಆದೇಶ ಹೊರಡಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಗ್ಯಾರಂಟಿ ಯೋಜನೆಗಳ ಆದೇಶ ಟಿಪ್ಪಣಿ ಸಂಖ್ಯೆ: Secy(B&R)2306/F/2024, ದಿನಾಂಕ: 24/01/2024 ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದ್ದು, ತಕ್ಷಣದಿಂದ ಜಾರಿಗೆ ಬರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. V. 25/01/2024

(ವಿಮಲಾಕ್ಷಿ, ಬಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಆಡಳಿತ ಸುಧಾರಣೆ).

ಇವರಿಗೆ,

1) ಮಹಾಲೇಖಪಾಲರು (ಲೆಕ್ಕಪತ್ರ 1&2) / ಲೆಕ್ಕಪರಿಶೋಧನೆ, ಕರ್ನಾಟಕ.
2) ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ
3) ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು.
4) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ
5) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ
6) ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು.
7) ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ – ಮುಂದಿನ ಅಗತ್ಯ ಕ್ರಮಕ್ಕಾಗಿ.
8) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
10) ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

ಅನುಬಂಧ-2

CS-8262795/24
31/7/24

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಸಾಂಸ್ಥಿಕ ಕಾರ್ಯವಿಧಾನಗಳು, ರಾಜ್ಯ ಮಟ್ಟದಲ್ಲಿ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಮಟ್ಟದಲ್ಲಿ ಅನುಷ್ಠಾನ ಸಮಿತಿ, ಬಿಬಿಎಂಪಿ ಮಟ್ಟದ ಅನುಷ್ಠಾನ ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನ ಸಮಿತಿಗಳನ್ನು ರಚಿಸಿದ್ದು, ಸದರಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸ್ಥಿಮರ 2024, ದಿನಾಂಕ: 25.01.2024.
2) ಮಾನ್ಯ ಮುಖ್ಯ ಮಂತ್ರಿಗಳ ಟಿಪ್ಪಣಿ ದಿನಾಂಕ:19.06.2024.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ "ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ಬಿಬಿಎಂಪಿ ಮಟ್ಟದಲ್ಲಿ ಬಿ.ಬಿ.ಎಂ.ಪಿ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಿ, ಸದರಿ ಪ್ರಾಧಿಕಾರ ಮತ್ತು ಸಮಿತಿಗಳ ಕರ್ತವ್ಯ ಮತ್ತು ಜವಾಬ್ದಾರಿ ನಿರ್ವಹಣೆ ಬಗ್ಗೆ ನಿರ್ದೇಶನಗಳನ್ನು ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸ್ಥಿಮರ 2024, ದಿನಾಂಕ: 25.01.2024ಕ್ಕೆ, ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಸೂಕ್ತ ತಿದ್ದುಪಡಿಗಳನ್ನು ಮಾಡಲು ಆದೇಶಿಸಿರುತ್ತಾರೆ.

1. ತಾಲ್ಲೂಕು ಸಮಿತಿಗಳ ಸದಸ್ಯರ ನಾಮನಿರ್ದೇಶನ ಈಗಾಗಲೇ ಯಾವುದಾದರೂ ತಾಲ್ಲೂಕಿನಲ್ಲಿ ಆಗದಿದ್ದಲ್ಲಿ ಅಂತಹ ಕಡೆ ಜಿಲ್ಲಾ ಉಸ್ತುವಾರಿ ಸಚಿವರು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರೊಂದಿಗೆ ಚರ್ಚಿಸಿ ತಾಲ್ಲೂಕು ಸಮಿತಿಗಳ ಸದಸ್ಯರ ನಾಮನಿರ್ದೇಶನವನ್ನು ಪೂರ್ಣಗೊಳಿಸುವುದು. ನಾಮನಿರ್ದೇಶನ ಮಾಡುವಾಗ ಮಹಿಳೆಯರಿಗೆ ಮತ್ತು ಯುವಕರಿಗೆ ಅಗತ್ಯ ಪ್ರಾತಿನಿಧ್ಯವನ್ನು ಕೊಡಬೇಕು.
2. ತಾಲ್ಲೂಕು ಸಮಿತಿಯ ಅಧ್ಯಕ್ಷರುಗಳಿಗೆ ತಿಂಗಳಿಗೆ ರೂ.25,000/- ಗಳ ಗೌರವಧನ ಕೊಡಬೇಕು ಹಾಗೂ ತಾಲ್ಲೂಕು ಸಮಿತಿಯ ಸದಸ್ಯರುಗಳಿಗೆ ಸೂಕ್ತ ಸಭಾ ಭತ್ಯೆ (Sitting Fees) ಯನ್ನು ನಿಗಧಿಪಡಿಸುವುದು.
3. ಗ್ಯಾರಂಟಿ ಪ್ರಾಧಿಕಾರ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಗ್ಯಾರಂಟಿ ಸಮಿತಿಗಳ ಒಟ್ಟಾರೆ ವಿಷಯಗಳನ್ನು ವ್ಯವಹರಿಸಲು ಪ್ರಸ್ತುತ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿಯವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿರುತ್ತದೆ. ಆದರೆ ಗ್ಯಾರಂಟಿಗಳು ವಿವಿಧ ಇಲಾಖೆಗಳ ಮೂಲಕ ಅನುಷ್ಠಾನಗೊಳ್ಳುತ್ತಿರುವುದರಿಂದ ಸಮನ್ವಯ ಸಾಧಿಸುವ ಹಿತದೃಷ್ಟಿಯಿಂದ ನೋಡಲ್ ಅಧಿಕಾರಿಯನ್ನು ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ರವರನ್ನು ನೇಮಿಸುವುದು.
4. ಗ್ಯಾರಂಟಿ ಪ್ರಾಧಿಕಾರ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳಿಗೆ ಸೂಕ್ತವಾದ ಕಛೇರಿ ಹಾಗೂ ಪೀಠೋಪಕರಣಗಳನ್ನು ಸಹ ಒದಗಿಸಲು ಕ್ರಮ ಕೈಗೊಳ್ಳುವುದು.





File No. DPAR-AR/31/TAE/2026-DPAR-AR-INSP-DPAR-AR-SEC (Computer No. 2110040)
Generated from eOffice by M.SHIVANNA, DPARAR-INS-SA(MS), SENIOR ASSISTANT, DEPARTMENT OF PERSONNEL AND ADMINISTRATIVE REFORMS ,
Scanned with CamScanner

5. ಗ್ಯಾರಂಟಿ ಕಾರ್ಯಕ್ರಮಕ್ಕಾಗಿ ಒಂದು ಪ್ರತ್ಯೇಕ ಲೆಕ್ಕಶೀರ್ಷಿಕೆಯನ್ನು ಸೃಜಿಸಲು ಆರ್ಥಿಕ ಇಲಾಖೆಗೆ ಸೂಚಿಸುವುದು.
6. ಜಿಲ್ಲಾ ಹಂತದಲ್ಲಿ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕಾರ್ಪೋರೇಷನ್ ಮಟ್ಟದಲ್ಲಿ ಆಯಾ ಮಹಾನಗರ ಪಾಲಿಕೆಗಳ ಆಯುಕ್ತರು ಗ್ಯಾರಂಟಿಗಳ ನೋಡಲ್ ಅಧಿಕಾರಿಗಳಾಗಿರತಕ್ಕದ್ದು.

ರಾಜ್ಯ ಸರ್ಕಾರವು ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮತ್ತು ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಿರುವ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಇತರೆ) 18 ಪಿಜಿಸಿ 2024 (ಭಾಗ-2), ಬೆಂಗಳೂರು ದಿನಾಂಕ: 24/07/2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರು, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಗೌರವಧನ/ಸಭಾ ಭತ್ಯೆಯನ್ನು ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಿದೆ:-

i) **ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ:**

| | |
|---|---|
| ಅಧ್ಯಕ್ಷರು | ರೂ.40,000.00 (ಪ್ರತಿ ತಿಂಗಳಿಗೆ ಗೌರವಧನ) |
| ಉಪಾಧ್ಯಕ್ಷರು | ರೂ.1,200.00 (ಪ್ರತಿ ಸಭೆಗೆ ಸಭಾ ಭತ್ಯೆ) |
| ಸದಸ್ಯರು | ರೂ.1,100.00 (ಪ್ರತಿ ಸಭೆಗೆ ಸಭಾ ಭತ್ಯೆ) |

ii) **ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ:**

| | |
|---|---|
| ಅಧ್ಯಕ್ಷರು | ರೂ.25,000.00 (ಪ್ರತಿ ತಿಂಗಳಿಗೆ ಗೌರವಧನ) |
| ಸದಸ್ಯರು | ರೂ.1,000.00 (ಪ್ರತಿ ಸಭೆಗೆ ಸಭಾ ಭತ್ಯೆ) |





Scanned with CamScann



Generated from eOffice by M.SHIVANNA, DPARAR-INS-SA(MS), SENIOR ASSISTANT, DEPARTMENT OF PERSONNEL AND ADMINISTRATIVE REFORMS ,

iii) ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ

| | |
|---|---|
| ಅಧ್ಯಕ್ಷರು | ರೂ.40,000.00<br>(ಪ್ರತಿ ತಿಂಗಳಿಗೆ ಗೌರವಧನ) |
| ಸದಸ್ಯರು | ರೂ.1,200.00<br>(ಪ್ರತಿ ಸಭೆಗೆ ಸಭಾ ಭತ್ಯೆ) |

2) ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮತ್ತು ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯು ತಿಂಗಳಿಗೆ ಗರಿಷ್ಠ 2 ಸಭೆಗಳನ್ನು ಆಯೋಜಿಸತಕ್ಕದ್ದು.

3) ಗ್ಯಾರಂಟಿ ಯೋಜನೆಗಳು ವಿವಿಧ ಇಲಾಖೆಗಳ ಮೂಲಕ ಅನುಷ್ಠಾನಗೊಳ್ಳುತ್ತಿರುವುದರಿಂದ ಸಮನ್ವಯ ಸಾಧಿಸುವ ದೃಷ್ಟಿಯಿಂದ, ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ ಸುಧಾರಣೆ) ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

4) ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯನ್ನು ನಡೆಸಲು ಜಿಲ್ಲಾ ಪಂಚಾಯತ್‌ನ ಸಭಾಂಗಣ ಹಾಗೂ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯನ್ನು ನಡೆಸಲು ತಾಲ್ಲೂಕು ಪಂಚಾಯತ್‌ನ ಸಭಾಂಗಣವನ್ನು ಉಪಯೋಗಿಸಿಕೊಳ್ಳತಕ್ಕದ್ದು.

5) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇಆಸು 18 ಸ್ಕೀಮರ 2024, ದಿನಾಂಕ:25.01.2024 ರಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿ ಆಯಾ ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳನ್ನು ನೇಮಿಸಲಾಗಿತ್ತು. ಪ್ರಸ್ತುತ ಸದರಿ ಸಮಿತಿಗೆ ಆಯಾ ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳ ಬದಲಾಗಿ ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಿಸಿ ಆದೇಶಿಸಿದೆ.

6) ಜಿಲ್ಲಾ ಮಟ್ಟದ ಸದಸ್ಯ ಕಾರ್ಯದರ್ಶಿಗಳಾದ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಯವರು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ಜಿಲ್ಲಾ ಪಂಚಾಯತ್‌ನ ಕಛೇರಿ ಆವರಣದಲ್ಲಿ ಕಛೇರಿಯ ವ್ಯವಸ್ಥೆ ಮತ್ತು ಸದರಿ ಕಛೇರಿಗೆ ಅಗತ್ಯವಿರುವ ಪೀಠೋಪಕರಣಗಳ ವ್ಯವಸ್ಥೆಯನ್ನು ಮಾಡುವುದು ಹಾಗೂ ಸದರಿ ಸಮಿತಿಯ ಸಭೆಯ ದಿನಗಳಲ್ಲಿ ತಮ್ಮ ವ್ಯಾಪ್ತಿಯಲ್ಲಿ ಬರುವ ಸಿಬ್ಬಂದಿಗಳನ್ನು ನಿಯೋಜಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

7) ತಾಲ್ಲೂಕು ಮಟ್ಟದ ಸದಸ್ಯ ಕಾರ್ಯದರ್ಶಿಗಳಾದ ಕಾರ್ಯನಿರ್ವಹಣಾ ಅಧಿಕಾರಿಯವರು ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ತಾಲ್ಲೂಕು ಪಂಚಾಯತ್‌ನ ಕಛೇರಿ ಆವರಣದಲ್ಲಿ ಕಛೇರಿ ವ್ಯವಸ್ಥೆ ಮತ್ತು ಸದರಿ ಕಛೇರಿಗೆ ಅಗತ್ಯವಾದ ಪೀಠೋಪಕರಣಗಳ ವ್ಯವಸ್ಥೆಯನ್ನು ಮಾಡುವುದು ಹಾಗೂ ಸದರಿ ಸಮಿತಿಯ ಸಭೆಯ ದಿನಗಳಲ್ಲಿ ತಮ್ಮ ವ್ಯಾಪ್ತಿಯಲ್ಲಿ ಬರುವ ಸಿಬ್ಬಂದಿಗಳನ್ನು ನಿಯೋಜಿಸಲು ಅಗತ್ಯ ಕ್ರಮ ಕೈಗೊಳ್ಳುವುದು.





Scanned with CamScanner

8) ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ಸದಸ್ಯ ಕಾರ್ಯದರ್ಶಿಯಾಗಿ ವಿಶೇಷ ಆಯುಕ್ತರು (ಆಡಳಿತ), ಬಿಬಿಎಂಪಿ ರವರು ಬಿಬಿಎಂಪಿ ಪ್ರಧಾನ ಕಛೇರಿ ಆವರಣದಲ್ಲಿ ಕಛೇರಿ ವ್ಯವಸ್ಥೆ ಮತ್ತು ಸದರಿ ಕಛೇರಿಗೆ ಅಗತ್ಯವಾದ ಪೀಠೋಪಕರಣಗಳ ವ್ಯವಸ್ಥೆಯನ್ನು ಮಾಡುವುದು ಹಾಗೂ ಸದರಿ ಸಮಿತಿಯ ಸಭೆಯ ದಿನಗಳಲ್ಲಿ ತಮ್ಮ ವ್ಯಾಪ್ತಿಯಲ್ಲಿ ಬರುವ ಸಿಬ್ಬಂದಿಗಳನ್ನು ನಿಯೋಜಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

9) ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ಗೌರವಧನ ಮತ್ತು ಸಭಾ ಭತ್ಯೆಯ ಮೊತ್ತವನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಯವರ ಕಛೇರಿ: ZP-2515-00-196-1-05 (2515-00-101-0-28-090) ಮತ್ತು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾ ಅಧಿಕಾರಿಯವರ ಕಛೇರಿ: EO 2515-00-197-1-10 (2515-00-102-0-0-61-090) ಲೆಕ್ಕಶೀರ್ಷಿಕೆಗಳಿಂದ ಭರಿಸುವುದು.

10) ಬಿಬಿಎಂಪಿ ಅಧ್ಯಕ್ಷರು ಮತ್ತು ಬಿಬಿಎಂಪಿ ಯ ಸದಸ್ಯರುಗಳಿಗೆ ವೇತನ ಪಾವತಿಸುವ ಲೆಕ್ಕ ಶೀರ್ಷಿಕೆಯಡಿ ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಿಗೆ ಪ್ರತಿ ಮಾಹೆಗೆ ರೂ.40,000.00 ಗಳಂತೆ ಹಾಗೂ ಸದಸ್ಯರುಗಳಿಗೆ ಪ್ರತಿ ಸಭೆಯಲ್ಲಿ ಭಾಗವಹಿಸಿದ್ದಕ್ಕೆ ಸಭಾ ಭತ್ಯೆಯನ್ನು (sitting fee) ಪಾವತಿಸತಕ್ಕದ್ದು.

11) ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಪ್ರಾದೇಶಿಕ ರಾಜ್ಯ ಉಪಾಧ್ಯಕ್ಷರುಗಳನ್ನು ಜಿಲ್ಲಾ ಉಸ್ತುವಾರಿ ಸಚಿವರು ನಡೆಸುವ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ. ಸಭೆಗೆ ಆಹ್ವಾನಿಸತಕ್ಕದ್ದು. ಅದೇ ರೀತಿ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರನ್ನು ವಿಧಾನ ಸಭಾ ಸದಸ್ಯರುಗಳು ನಡೆಸುವ ತಾಲ್ಲೂಕು ತ್ರೈಮಾಸಿಕ ಕೆ.ಡಿ.ಪಿ. ಸಭೆಗೆ ಆಹ್ವಾನಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲ್ಯ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
24/07/2024
(ವಿಮಲಾಕ್ಷಿ.ಬಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ತಪಾಸಣೆ & ಸ್ಕೀಮ್)

ಗೆ:

1) ಮಹಾಲೇಖಪಾಲರು (ಲೆಕ್ಕ ಪತ್ರ 1 & 2)/ಲೆಕ್ಕ ಪರಿಶೋಧನ, ಕರ್ನಾಟಕ
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
3) ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು
4) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ
5) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ
6) ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು
7) ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
8) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
9) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
10) ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
11) ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು





Scanned with CamScanner



Generated from eOffice by M.SHIVANNA, DPARAR-INS-SA(MS), SENIOR ASSISTANT, DEPARTMENT OF PERSONNEL AND ADMINISTRATIVE REFORMS .

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ.) ವ್ಯಾಪ್ತಿಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ 5 ಜನ ಉಪಾಧ್ಯಕ್ಷರ ಹುದ್ದೆಗಳನ್ನು ಸೃಜಿಸುವ ಹಾಗೂ ಗೌರವಧನ ನಿಗಧಿಪಡಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 18 ಸ್ಕೀಮರ 2024, ದಿನಾಂಕ: 25.01.2024
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 18 ಸ್ಕೀಮರ 2024 (ಭಾಗ-2), ದಿನಾಂಕ: 24.07.2024.
3. ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 860 ವೆಚ್ಚ-12/2024, ದಿನಾಂಕ: 07.12.2024
4. ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 721 ವೆಚ್ಚ-12/2024, ದಿನಾಂಕ: 24.02.2025

*********

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲಿ ಓದಲಾದ ದಿನಾಂಕ: 25.01.2024ರ ಸರ್ಕಾರದ ಆದೇಶದಲ್ಲಿ, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ 'ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ಬಿಬಿಎಂಪಿ ಮಟ್ಟದಲ್ಲಿ ಬಿ.ಬಿ.ಎಂ.ಪಿ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 24.07.2024ರ ಸರ್ಕಾರದ ಆದೇಶದಲ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರಿಗೆ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರಿಗೆ ಹಾಗೂ ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರಿಗೆ ಗೌರವಧನ / ಸಭಾ ಭತ್ಯೆಯನ್ನು ನಿಗಧಿಪಡಿಸಿ ಆದೇಶಿಸಲಾಗಿದೆ

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ 07.12.2024 ಹಿಂಬರಹದಲ್ಲಿ ಬಿ.ಬಿ.ಎಂ.ಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರತಿ ಉಪಾಧ್ಯಕ್ಷರಿಗೆ ಮಾಸಿಕ ರೂ.10,000/- ಗಳಂತೆ ಹಾಗೂ ಬಿ.ಬಿ.ಎಂ.ಪಿ. ವ್ಯಾಪ್ತಿಯ 28 ವಿಧಾನಸಭಾ ಕ್ಷೇತ್ರಗಳ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರತಿ ಅಧ್ಯಕ್ಷರಿಗೆ ಮಾಸಿಕ ರೂ.25,000/- ಗಳಂತೆ ಗೌರವಧನವನ್ನು ನಿಗಧಿಪಡಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿನಾಂಕ: 24.02.2025ರ ಟಿಪ್ಪಣಿಯಲ್ಲಿ ಬಿಬಿಎಂಪಿ ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದಲ್ಲಿ ಇರುವ ಸಮಿತಿಯಂತೆಯೇ ಬಿಬಿಎಂಪಿ ವ್ಯಾಪ್ತಿಯ ಸಮಿತಿಗೆ 05 ಉಪಾಧ್ಯಕ್ಷರ ಹುದ್ದೆಗಳನ್ನು ಸೃಜಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 159 ಸ್ಥೀಮರ 2024,**
**ಬೆಂಗಳೂರು, ದಿನಾಂಕ: 24.02.2025.**

1) ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ.) ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಗೊಳಿಸುವ ನಿಟ್ಟಿನಲ್ಲಿ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದಲ್ಲಿ ಇರುವ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯಂತೆಯೇ ಬಿಬಿಎಂಪಿ ವ್ಯಾಪ್ತಿಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ 05 ಉಪಾಧ್ಯಕ್ಷರ ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ.

2) ಮುಂದುವರೆದು, ಬಿ.ಬಿ.ಎಂ.ಪಿ. ವ್ಯಾಪ್ತಿಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ 05 ಜನ ಉಪಾಧ್ಯಕ್ಷರುಗಳಿಗೆ ಹಾಗೂ ಬಿ.ಬಿ.ಎಂ.ಪಿ. ವ್ಯಾಪ್ತಿಯ 28 ವಿಧಾನಸಭಾ ಕ್ಷೇತ್ರಗಳ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರತಿಯೊಬ್ಬ ಅಧ್ಯಕ್ಷರಿಗೆ ಈ ಕೆಳಕಂಡಂತೆ ಗೌರವಧನವನ್ನು ನಿಗಧಿಪಡಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ವಿವರ | ಮಾಸಿಕ ಗೌರವಧನ |
|---|---|---|
| 1. | ಬಿ.ಬಿ.ಎಂ.ಪಿ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರತಿ ಉಪಾಧ್ಯಕ್ಷರಿಗೆ | ರೂ.10,000.00 |
| 2. | ಬಿ.ಬಿ.ಎಂ.ಪಿ. ವ್ಯಾಪ್ತಿಯ 28 ವಿಧಾನಸಭಾ ಕ್ಷೇತ್ರಗಳ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರತಿ ಅಧ್ಯಕ್ಷರಿಗೆ | ರೂ.25,000.00 |

3) ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 860 ವೆಚ್ಚ-12/2024, ದಿನಾಂಕ: 07.12.2024 ಮತ್ತು ಟಿಪ್ಪಣಿ ಸಂಖ್ಯೆ: ಆಇ 721 ವೆಚ್ಚ-12/2024, ದಿನಾಂಕ: 24.02.2025 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Vimala 24/02/2025

(ವಿಮಲಾಕ್ಷಿ. ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ತಪಾಸಣೆ)

24/2

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಪತ್ರ 1 & 2) / ಲೆಕ್ಕ ಪರಿಶೋಧನೆ, ಕರ್ನಾಟಕ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ.

3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸಸೌಧ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ವಿಕಾಸಸೌಧ.
8. ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
11. ವಿಶೇಷ ಆಯುಕ್ತರು (ಆಡಳಿತ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
12. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
13. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-12), ವಿಧಾನಸೌಧ, ಬೆಂಗಳೂರು.
15. ಅಧ್ಯಕ್ಷರು, ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಇವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂಖ್ಯೆ: 225, 2ನೇ ಮಹಡಿ, ವಿಧಾನಸೌಧ, ಬೆಂಗಳೂರು.
16. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಬೆಂಗಳೂರು ವಿಭಾಗ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಮೈಸೂರು ವಿಭಾಗ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಬೆಳಗಾವಿ ವಿಭಾಗ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಕಲಬುರಗಿ ವಿಭಾಗ ಇವರ ಆಪ್ತ ಕಾರ್ಯದರ್ಶಿ, ಜಯಮಹಲ್, ಬೆಂಗಳೂರು
20. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಿಗೆ ಗೌರವಧನವನ್ನು ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 18 ಸ್ವೀಮರ 2024, ದಿನಾಂಕ: 25.01.2024.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 18 ಸ್ವೀಮರ 2024 (ಭಾಗ-2), ದಿನಾಂಕ: 24.07.2024.
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 590 ವೆಚ್ಚ-12/2024, ದಿನಾಂಕ: 03.12.2024.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 25.01.2024ರ ಸರ್ಕಾರದ ಆದೇಶದಲ್ಲಿ, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ 'ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ಬಿಬಿಎಂಪಿ ಮಟ್ಟದಲ್ಲಿ ಬಿ.ಬಿ.ಎಂ.ಪಿ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 24.07.2024ರ ಸರ್ಕಾರದ ಆದೇಶದಲ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮತ್ತು ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ಮಾಸಿಕ ಗೌರವಧನ / ಸಭಾ ಭತ್ಯೆಯನ್ನು ನಿಗದಿಪಡಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 03.12.2024ರ ಅನಧಿಕೃತ ಟಿಪ್ಪಣಿ ಮೂಲಕ ಆರ್ಥಿಕ ಇಲಾಖೆಯು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರತಿ ಉಪಾಧ್ಯಕ್ಷರಿಗೆ ಸಭಾ ಭತ್ಯೆಯನ್ನು ನೀಡುವ ಬದಲಿಗೆ ಮಾಸಿಕ ರೂ.10,000/- ಗಳಂತೆ ಗೌರವಧನವನ್ನು ನಿಗದಿಪಡಿಸಲು ಸಹಮತಿ ನೀಡಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 18 ಸ್ವೀಮರ 2024,**
**ಬೆಂಗಳೂರು, ದಿನಾಂಕ: [illegible]**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಿಗೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 18 ಸ್ವೀಮರ 2024 (ಭಾಗ-2), ದಿನಾಂಕ: 24.07.2024ರಲ್ಲಿ ನಿಗದಿಪಡಿಸಲಾದ ಸಭಾ ಭತ್ಯೆಯ ಬದಲಿಗೆ ಮಾಸಿಕ ರೂ.10,000.00 (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳ ಗೌರವಧನವನ್ನು ನಿಗದಿಪಡಿಸಿ ಆದೇಶಿಸಿದೆ.

12

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 590 ವೆಚ್ಚ-12/2024, ದಿನಾಂಕ: 03.12.2024 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Vishalakshi 24/02/2025

(ವಿಶಾಲಾಕ್ಷಿ, ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಆಡಳಿತ ಸುಧಾರಣೆ-ತಪಾಸಣೆ)

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಪತ್ರ 1 & 2) / ಲೆಕ್ಕ ಪರಿಶೋಧನೆ, ಕರ್ನಾಟಕ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ.
3. ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ / ವಿಕಾಸಸೌಧ, ಬೆಂಗಳೂರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು
5. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ವಿಕಾಸಸೌಧ, ಬೆಂಗಳೂರು
10. ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
13. ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ವಿಧಾನಸೌಧ, ವಿಕಾಸಸೌಧ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ವಿಶೇಷ ಆಯುಕ್ತರು (ಆಡಳಿತ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
14. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
15. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12), ವಿಧಾನಸೌಧ, ಬೆಂಗಳೂರು.
17. ಅಧ್ಯಕ್ಷರು, ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಇವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂಖ್ಯೆ: 225, 2ನೇ ಮಹಡಿ, ವಿಧಾನಸೌಧ, ಬೆಂಗಳೂರು.
18. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಬೆಂಗಳೂರು ವಿಭಾಗ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಮೈಸೂರು ವಿಭಾಗ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಬೆಳಗಾವಿ ವಿಭಾಗ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
21. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಕಲಬುರಗಿ ವಿಭಾಗ ಇವರ ಆಪ್ತ ಕಾರ್ಯದರ್ಶಿ, ಜಯಮಹಲ್, ಬೆಂಗಳೂರು.
22. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.





Generated from eOffice by M.SHIVANNA, DPARAR-INS-SA(MS), SENIOR ASSISTANT, DEPARTMENT OF PERSONNEL AND ADMINISTRATIVE REFORMS .

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವೇತನ ಮತ್ತು ಇತರೆ ಭತ್ಯೆಗಳನ್ನು ನಿಗಧಿಪಡಿಸುವ ಕುರಿತು.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸ್ಪೀಮರ 2024, ದಿನಾಂಕ: 25.01.2024.
2) ಮಾನ್ಯ ಮುಖ್ಯ ಮಂತ್ರಿಗಳ ಟಿಪ್ಪಣಿ ದಿನಾಂಕ:19 06 2024
3) ಸಮಸಂಖ್ಯೆಯ ಆದೇಶ ದಿನಾಂಕ: 24.07.2024.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ 'ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ಬಿಬಿಎಂಪಿ ಮಟ್ಟದಲ್ಲಿ ಬಿ.ಬಿ.ಎಂ.ಪಿ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಲು ಹಾಗೂ ಸದರಿ ಪ್ರಾಧಿಕಾರ ಮತ್ತು ಸಮಿತಿಗಳ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ರಚಿಸಿ ಆದೇಶಿಸಲಾಗಿದೆ

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸ್ಪೀಮರ 2024, ದಿನಾಂಕ 25.01.2024ಕ್ಕೆ ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಸೂಕ್ತ ತಿದ್ದುಪಡಿಗಳನ್ನು ಮಾಡಲು ಆದೇಶಿಸಿರುತ್ತಾರೆ.

1. ತಾಲ್ಲೂಕು ಸಮಿತಿಗಳ ಸದಸ್ಯರ ನಾಮನಿರ್ದೇಶನ ಈಗಾಗಲೇ ಯಾವುದಾದರೂ ತಾಲ್ಲೂಕಿನಲ್ಲಿ ಆಗದಿದ್ದಲ್ಲಿ ಅಂತಹ ಕಡೆ ಜಿಲ್ಲಾ ಉಸ್ತುವಾರಿ ಸಚಿವರು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರೊಂದಿಗೆ ಚರ್ಚಿಸಿ ತಾಲ್ಲೂಕು ಸಮಿತಿಗಳ ಸದಸ್ಯರ ನಾಮನಿರ್ದೇಶನವನ್ನು ಪೂರ್ಣಗೊಳಿಸುವುದು. ನಾಮನಿರ್ದೇಶನ ಮಾಡುವಾಗ ಮಹಿಳೆಯರಿಗೆ ಮತ್ತು ಯುವಕರಿಗೆ ಅಗತ್ಯ ಪ್ರಾತಿನಿದ್ಯವನ್ನು ಕೊಡಬೇಕು.

2. ತಾಲ್ಲೂಕು ಸಮಿತಿಯ ಅಧ್ಯಕ್ಷರುಗಳಿಗೆ ತಿಂಗಳಿಗೆ ರೂ.25,000/- ಗಳ ಗೌರವಧನ ಕೊಡಬೇಕು ಹಾಗೂ ತಾಲ್ಲೂಕು ಸಮಿತಿಯ ಸದಸ್ಯರುಗಳಿಗೆ ಸೂಕ್ತ ಸಭಾ ಭತ್ಯೆ (Sitting Fees) ಯನ್ನು ನಿಗಧಿಪಡಿಸುವುದು.

3. ಗ್ಯಾರಂಟಿ ಪ್ರಾಧಿಕಾರ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಗ್ಯಾರಂಟಿ ಸಮಿತಿಗಳ ಒಟ್ಟಾರೆ ವಿಷಯಗಳನ್ನು ವ್ಯವಹರಿಸಲು ಪ್ರಸ್ತುತ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿಯವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿರುತ್ತದೆ. ಆದರೆ ಗ್ಯಾರಂಟಿಗಳು ವಿವಿಧ ಇಲಾಖೆಗಳ ಮೂಲಕ ಅನುಷ್ಠಾನಗೊಳ್ಳುತ್ತಿರುವುದರಿಂದ ಸಮನ್ವಯ ಸಾಧಿಸುವ ಹಿತದೃಷ್ಟಿಯಿಂದ




Generated from eOffice by M.SHIVANNA, DPARAR-INS-SA(MS), SENIOR ASSISTANT, DEPARTMENT OF PERSONNEL AND ADMINISTRATIVE REFORMS.
Scanned with OKEN Scanner

ನೋಡಲ್ ಅಧಿಕಾರಿಯನ್ನು, ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಇ-ಆಡಳಿತ) ರವರನ್ನು ನೇಮಿಸುವುದು.

4. ಗ್ಯಾರಂಟಿ ಪ್ರಾಧಿಕಾರ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳಿಗೆ ಸೂಕ್ತವಾದ ಕಛೇರಿ ಹಾಗೂ ಪೀಠೋಪಕರಣಗಳನ್ನು ಸಹ ಒದಗಿಸಲು ಕ್ರಮ ಕೈಗೊಳ್ಳುವುದು.

5. ಗ್ಯಾರಂಟಿ ಕಾರ್ಯಕ್ರಮಕ್ಕಾಗಿ ಒಂದು ಪ್ರತ್ಯೇಕ ಲೆಕ್ಕಶೀರ್ಷಿಕೆಯನ್ನು ಸೃಜಿಸಲು ಆರ್ಥಿಕ ಇಲಾಖೆಗೆ ಸೂಚಿಸುವುದು.

6. ಜಿಲ್ಲಾ ಹಂತದಲ್ಲಿ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕಾರ್ಪೋರೇಷನ್ ಮಟ್ಟದಲ್ಲಿ ಆಯಾ ಮಹಾನಗರ ಪಾಲಿಕೆಗಳ ಆಯುಕ್ತರು ಗ್ಯಾರಂಟಿಗಳ ನೋಡಲ್ ಅಧಿಕಾರಿಗಳಾಗಿರತಕ್ಕದ್ದು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಸೂಚಿಸಿರುವ ಆರು ಅಂಶಗಳ ಕುರಿತು ಆದೇಶ ಹೊರಡಿಸಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸಿಬ್ಬಮರ 2024 (ಭಾಗ-2), ಬೆಂಗಳೂರು ದಿನಾಂಕ:24/07/2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಅಧ್ಯಕ್ಷರ ಆಪ್ತ ಸಿಬ್ಬಂದಿ ಮತ್ತು ಉಪಾಧ್ಯಕ್ಷರು, ಉಪಾಧ್ಯಕ್ಷರ ಆಪ್ತ ಸಿಬ್ಬಂದಿ ಹಾಗೂ ಪ್ರಾಧಿಕಾರದ ಸದಸ್ಯರುಗಳ ವೇತನ ಮತ್ತು ಇತರೆ ಸವಲತ್ತುಗಳನ್ನು ನಿಗಧಿಪಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ:</u>**

**ವೇತನ ಹಾಗೂ ಇತರೆ ಭತ್ಯೆಗಳು:**

| ಕ್ರ.ಸಂ | ಹುದ್ದೆ | ವೇತನ ಮತ್ತು ಇತರೆ ಭತ್ಯೆ | ಸಕ್ಷಮ ಪ್ರಾಧಿಕಾರ |
|---|---|---|---|
| 1. | ಅಧ್ಯಕ್ಷರು | ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಇಲಾಖೆಯ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 03 ಶಾಸನ 2022, ದಿನಾಂಕ:11.03.2022 ರನ್ವಯ ಸಂಪುಟ ದರ್ಜೆ ಸಚಿವರ ವೇತನ. | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ) |

2





Scanned with OKEN Scanner

| | | | |
|---|---|---|---|
| 2 | ಅಧ್ಯಕ್ಷರ ಆಪ್ತ ಸಿಬ್ಬಂದಿ | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 195 ಆಹಿಸೇ 2000, ದಿನಾಂಕ: 29.04.2023 ರಲ್ಲಿ ಸಂಪುಟ ದರ್ಜೆಯ ಸಚಿವರಿಗೆ ಒದಗಿಸಿರುವ 12 ಸಂಖ್ಯೆಯ ಆಪ್ತ ಸಿಬ್ಬಂದಿಯ ವಿವಿಧ ಹುದ್ದೆಗೆ ಅನುಸಾರವಾದ ವೇತನ. | |
| 3 | ಉಪಾಧ್ಯಕ್ಷರು | ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಇಲಾಖೆಯ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 03 ಶಾಸನ 2022, ದಿನಾಂಕ:11.03.2022 ರನ್ವಯ ರಾಜ್ಯ ಸಚಿವ ದರ್ಜೆಯ ಸಚಿವರ ವೇತನ. | |
| 4 | ಉಪಾಧ್ಯಕ್ಷರ ಆಪ್ತ ಸಿಬ್ಬಂದಿ | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 195 ಆಹಿಸೇ 2000, ದಿನಾಂಕ: 29.04.2023ರಲ್ಲಿ ರಾಜ್ಯ ಸಚಿವ ದರ್ಜೆಯ ಸಚಿವರಿಗೆ ಒದಗಿಸಿರುವ 12 ಸಂಖ್ಯೆಯ ಆಪ್ತ ಸಿಬ್ಬಂದಿಯ ವಿವಿಧ ಹುದ್ದೆಗೆ ಅನುಸಾರವಾದ ವೇತನ | |

ಕರ್ನಾಟಕ ರಾಜ್ಯಪಾಲ್ಯ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
B. V 24/07/2024
(ವಿಮಲಾಕ್ಷಿ.ಬಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ತಪಾಸಣೆ & ಸ್ಕೀಮರ)

ಗೆ:

1) ಮಹಾಲೇಖಪಾಲರು (ಲೆಕ್ಕ ಪತ್ರ, 1 & 2)/ಲೆಕ್ಕ ಪರಿಶೋಧನೆ, ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
3) ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು
4) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ
5) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ
6) ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು
7) ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
8) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
9) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
10) ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
11) ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು






Scanned with OKEN Scanner

ಅನುಬಂಧ-3

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವೇತನ ಮತ್ತು ಇತರೆ ಭತ್ಯೆಗಳನ್ನು ನಿಗಧಿಪಡಿಸುವ ಕುರಿತು.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸ್ಥಿಮರ 2024, ದಿನಾಂಕ: 25.01.2024.
2) ಮಾನ್ಯ ಮುಖ್ಯ ಮಂತ್ರಿಗಳ ಟಿಪ್ಪಣಿ ದಿನಾಂಕ:19.06.2024.
3) ಸಮಸಂಖ್ಯೆಯ ಆದೇಶ ದಿನಾಂಕ: 24.07.2024.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ "ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ಬಿಬಿಎಂಪಿ ಮಟ್ಟದಲ್ಲಿ ಬಿ.ಬಿ.ಎಂ.ಪಿ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಲು ಹಾಗೂ ಸದರಿ ಪ್ರಾಧಿಕಾರ ಮತ್ತು ಸಮಿತಿಗಳ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸ್ಥಿಮರ 2024, ದಿನಾಂಕ: 25.01.2024ಕ್ಕೆ ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಸೂಕ್ತ ತಿದ್ದುಪಡಿಗಳನ್ನು ಮಾಡಲು ಆದೇಶಿಸಿರುತ್ತಾರೆ.

1. ತಾಲ್ಲೂಕು ಸಮಿತಿಗಳ ಸದಸ್ಯರ ನಾಮನಿರ್ದೇಶನ ಈಗಾಗಲೇ ಯಾವುದಾದರೂ ತಾಲ್ಲೂಕಿನಲ್ಲಿ ಆಗದಿದ್ದಲ್ಲಿ ಅಂತಹ ಕಡೆ ಜಿಲ್ಲಾ ಉಸ್ತುವಾರಿ ಸಚಿವರು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರೊಂದಿಗೆ ಚರ್ಚಿಸಿ ತಾಲ್ಲೂಕು ಸಮಿತಿಗಳ ಸದಸ್ಯರ ನಾಮನಿರ್ದೇಶನವನ್ನು ಪೂರ್ಣಗೊಳಿಸುವುದು. ನಾಮನಿರ್ದೇಶನ ಮಾಡುವಾಗ ಮಹಿಳೆಯರಿಗೆ ಮತ್ತು ಯುವಕರಿಗೆ ಅಗತ್ಯ ಪ್ರಾತಿನಿಧ್ಯವನ್ನು ಕೊಡಬೇಕು.

2. ತಾಲ್ಲೂಕು ಸಮಿತಿಯ ಅಧ್ಯಕ್ಷರುಗಳಿಗೆ ತಿಂಗಳಿಗೆ ರೂ.25,000/- ಗಳ ಗೌರವಧನ ಕೊಡಬೇಕು ಹಾಗೂ ತಾಲ್ಲೂಕು ಸಮಿತಿಯ ಸದಸ್ಯರುಗಳಿಗೆ ಸೂಕ್ತ ಸಭಾ ಭತ್ಯೆ (Sitting Fees) ಯನ್ನು ನಿಗಧಿಪಡಿಸುವುದು.

3. ಗ್ಯಾರಂಟಿ ಪ್ರಾಧಿಕಾರ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಗ್ಯಾರಂಟಿ ಸಮಿತಿಗಳ ಒಟ್ಟಾರೆ ವಿಷಯಗಳನ್ನು ವ್ಯವಹರಿಸಲು ಪ್ರಸ್ತುತ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿಯವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿರುತ್ತದೆ. ಆದರೆ ಗ್ಯಾರಂಟಿಗಳು ವಿವಿಧ ಇಲಾಖೆಗಳ ಮೂಲಕ ಅನುಷ್ಠಾನಗೊಳ್ಳುತ್ತಿರುವುದರಿಂದ ಸಮನ್ವಯ ಸಾಧಿಸುವ ಹಿತದೃಷ್ಟಿಯಿಂದ







Generated from eOffice by M.SHIVANNA, DPARAR-INS-SA(MS), SENIOR ASSISTANT, DEPARTMENT OF PERSONNEL AND ADMINISTRATIVE REFORMS .

ನೋಡಲ್ ಅಧಿಕಾರಿಯನ್ನು ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ರವರನ್ನು ನೇಮಿಸುವುದು.

4. ಗ್ಯಾರಂಟಿ ಪ್ರಾಧಿಕಾರ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳಿಗೆ ಸೂಕ್ತವಾದ ಕಛೇರಿ ಹಾಗೂ ಪೀಠೋಪಕರಣಗಳನ್ನು ಸಹ ಒದಗಿಸಲು ಕ್ರಮ ಕೈಗೊಳ್ಳುವುದು.

5. ಗ್ಯಾರಂಟಿ ಕಾರ್ಯಕ್ರಮಕ್ಕಾಗಿ ಒಂದು ಪ್ರತ್ಯೇಕ ಲೆಕ್ಕಶೀರ್ಷಿಕೆಯನ್ನು ಸೃಜಿಸಲು ಆರ್ಥಿಕ ಇಲಾಖೆಗೆ ಸೂಚಿಸುವುದು

6. ಜಿಲ್ಲಾ ಹಂತದಲ್ಲಿ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕಾರ್ಪೋರೇಷನ್ ಮಟ್ಟದಲ್ಲಿ ಆಯಾ ಮಹಾನಗರ ಪಾಲಿಕೆಗಳ ಆಯುಕ್ತರು ಗ್ಯಾರಂಟಿಗಳ ನೋಡಲ್ ಅಧಿಕಾರಿಗಳಾಗಿರತಕ್ಕದ್ದು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಸೂಚಿಸಿರುವ ಆರು ಅಂಶಗಳ ಕುರಿತು ಆದೇಶ ಹೊರಡಿಸಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 18 ಸ್ಕೀಮರ 2024 (ಭಾಗ-2), ಬೆಂಗಳೂರು ದಿನಾಂಕ:24/07/2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಅಧ್ಯಕ್ಷರ ಆಪ್ತ ಸಿಬ್ಬಂದಿ ಮತ್ತು ಉಪಾಧ್ಯಕ್ಷರು, ಉಪಾಧ್ಯಕ್ಷರ ಆಪ್ತ ಸಿಬ್ಬಂದಿ ಹಾಗೂ ಪ್ರಾಧಿಕಾರದ ಸದಸ್ಯರುಗಳ ವೇತನ ಮತ್ತು ಇತರ ಸವಲತ್ತುಗಳನ್ನು ನಿಗಧಿಪಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ:**

**ವೇತನ ಹಾಗೂ ಇತರೆ ಭತ್ಯೆಗಳು:**

| ಕ್ರಸಂ | ಹುದ್ದೆ | ವೇತನ ಮತ್ತು ಇತರೆ ಭತ್ಯೆ | ಸಕ್ಷಮ ಪ್ರಾಧಿಕಾರ |
|---|---|---|---|
| 1 | ಅಧ್ಯಕ್ಷರು | ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಇಲಾಖೆಯ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 03 ಶಾಸನ 2022, ದಿನಾಂಕ:11.03.2022 ರನ್ವಯ ಸಂಪುಟ ದರ್ಜೆ ಸಚಿವರ ವೇತನ | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ) |

| | | | |
|---|---|---|---|
| 2. | ಅಧ್ಯಕ್ಷರ ಆಪ್ತ ಸಿಬ್ಬಂದಿ | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 195 ಆಹಿಸೇ 2000, ದಿನಾಂಕ: 29.04.2023 ರಲ್ಲಿ ಸಂಪುಟ ದರ್ಜೆಯ ಸಚಿವರಿಗೆ ಒದಗಿಸಿರುವ 12 ಸಂಖ್ಯೆಯ ಆಪ್ತ ಸಿಬ್ಬಂದಿಯ ವಿವಿಧ ಹುದ್ದೆಗೆ ಅನುಸಾರವಾದ ವೇತನ. | |
| 3. | ಉಪಾಧ್ಯಕ್ಷರು | ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಇಲಾಖೆಯ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 03 ಶಾಸನ 2022, ದಿನಾಂಕ:11.03.2022 ರನ್ವಯ ರಾಜ್ಯ ಸಚಿವ ದರ್ಜೆಯ ಸಚಿವರ ವೇತನ. | |
| 4. | ಉಪಾಧ್ಯಕ್ಷರ ಆಪ್ತ ಸಿಬ್ಬಂದಿ | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 195 ಆಹಿಸೇ 2000, ದಿನಾಂಕ: 29.04.2023ರಲ್ಲಿ ರಾಜ್ಯ ಸಚಿವ ದರ್ಜೆಯ ಸಚಿವರಿಗೆ ಒದಗಿಸಿರುವ 12 ಸಂಖ್ಯೆಯ ಆಪ್ತ ಸಿಬ್ಬಂದಿಯ ವಿವಿಧ ಹುದ್ದೆಗೆ ಅನುಸಾರವಾದ ವೇತನ | |

ಕರ್ನಾಟಕ ರಾಜ್ಯಪಾಲ್ಯ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
B. V[signature] 24/01/2024
**(ವಿಮಲಾಕ್ಷಿ.ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ತಪಾಸಣೆ & ಸ್ವೀಮರ)

ಗೆ:

1) ಮಹಾಲೇಖಪಾಲರು (ಲೆಕ್ಕ ಪತ್ರ, 1 & 2)/ಲೆಕ್ಕ ಪರಿಶೋಧನೆ, ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
3) ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು
4) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ
5) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ
6) ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು
7) ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
8) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
9) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
10) ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
11) ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು